[redacted]



# ಮೇ 07 ರಂದು ತಪ್ಪದೇ ಮತದಾನ ಮಾಡಿ-ಜಿ.ಖಲೀಲ್ಶಿಸಾಬ್



ಬಳ್ಳಾರಿ,ಏ.:ಎಲ್ಲಾ ಅರ್ಹ ಮತದಾರರು ಮೇ 7 ರಂದು ನಡೆಯುವ ಲೋಕಸಭಾ ಚುನಾವಣೆಗೆ ತಪ್ಪದೇ ಮತದಾನ ಮಾಡಬೇಕು ಎಂದು ಬಳ್ಳಾರಿ ನಗರ ವಿಧಾನಸಭೆ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ಶಿಸಾಬ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ಬರುವ ವಾರ್ಡ್ ಸಂಖ್ಯೆ 23 ರ ಭಗನ್ಸಿಂಗ್ ನಗರ, ಹರಿಶ್ಚಂದ್ರ ನಗರ, ಕನ್ನಡ ನಗರ ಮತ್ತು ವಾರ್ಡ್ ಸಂಖ್ಯೆ 19 ರ ಹುಸೇನ್ ನಗರ, ರಾಮಯ್ಯ ಕಾಲೋನಿ ಮತ್ತು ಮಾರುತಿ ಕಾಲೋನಿ ಪ್ರದೇಶದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಮತದಾನ ದಿನದಂದು ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಮತದಾರರು ತಮ್ಮ-ತಮ್ಮ ಹತ್ತಿರದ ಮತಗಟ್ಟೆ ಕುರಿತು ಮಾಹಿತಿ ಹೊಂದಬೇಕು. ಮತದಾನದಿಂದ ಯಾರೂ ಹೊರಗುಳಿಯಬಾರದು ಎಂದರು. ಲೋಕಸಭಾ ಚುನಾವಣೆಯಲ್ಲಿ ಶೇ.100 ರಷ್ಟು ಮತದಾನ ಮಾಡಬೇಕು. ಯಾರೂ ಕೂಡ ಯಾವುದೇ ಆಸೆ, ಆಮೀಷಕ್ಕೆ ಒಳಗಾಗಬಾರದು. ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಬೇಕು. 2024 ರ ಪ್ರಜಾಪ್ರಭುತ್ವ ಹಬ್ಬದಲ್ಲಿ ಪಾಲ್ಗೊಳ್ಳುವಂತೆ ಕರೆ ನೀಡಿದರು.ಈ ವೇಳೆ ಬಳ್ಳಾರಿ ಮಹಾನಗರ ಪಾಲಿಕೆ ವಲಯ ಆಯುಕ್ತರು, ಅಧಿಕಾರಿಗಳು ಹಾಗೂ ಸಿಬ್ಬಂದಿಯವರು, ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಇತರರು ಹಾಜರಿದ್ದರು.

# ಜನರೆದುರು ಕಣ್ಣೀರು ಹಾಕಿದ್ದೇ ಕುಮಾರಸ್ವಾಮಿ ಸಾಧನೆ

ಮಂಡ್ಯ:ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಯಾದರೂ ಎಚ್.ಡಿ.ಕುಮಾರಸ್ವಾಮಿ ಜಿಲ್ಲೆಗೆ ಯಾವುದೇ ಕೊಡುಗೆಯನ್ನು ನೀಡಿಲ್ಲ. ಜನರ ಮುಂದೆ ಕಣ್ಣೀರು ಹಾಕಿ ಹೋಗಿದ್ದೇ ಅವರ ಸಾಧನೆ ಎಂದು ಶಾಸಕ ರವಿಕುಮಾರ್ ಲೇವಡಿ ಮಾಡಿದರು.

ತಾಲೂಕಿನ ಚಿಕ್ಕ ಮಂಡ್ಯ ಗ್ರಾಮದಿಂದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ ಜೊತೆಗೂಡಿ ಪ್ರಚಾರ ಆರಂಭಿಸಿ, ವಿವಿಧ ಗ್ರಾಮಗಳಿಗೆ ತೆರಳಿ ಮಾತನಾಡಿ, ಕಾಂಗ್ರೆಸ್ ಪಕ್ಷದ ಎದುರಾಳಿ ಎಚ್.ಡಿ.ಕುಮಾರಸ್ವಾಮಿ ಕಣ್ಣೀರು ಹಾಕುವುದನ್ನು ಕರಗತ ಮಾಡಿಕೊಂಡಿದ್ದಾರೆ. ಕೇಳಿದರೆ ತಮ್ಮದು ಮಾತ್ರ ಹೃದಯ ಎನ್ನುತ್ತಾರೆ. ಆ ಹೃದಯವಿದ್ದವರು ಜಿಲ್ಲೆಗೆ ಏನು ಕೊಡುಗೆ ನೀಡಿದ್ದಾರೆ ಎಂಬುದನ್ನು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದರು.

ಕಳೆದ ವಿಧಾನಸಭೆ ಚುನಾವಣೆ ವೇಳೆ ಗೃಹಲಕ್ಷ್ಮೀ ಯೋಜನೆ ಜಾರಿಗೊಳಿಸಿ ಮಹಿಳೆಯರಿಗೆ ಪ್ರತಿ ತಿಂಗಳು 2000 ರು. ನೀಡುವುದಾಗಿ ಕಾಂಗ್ರೆಸ್ ಘೋಷಿಸಿದಾಗ ನಮ್ಮ ವಿರೋಧಿಗಳು ನಕ್ಕು ಇದೆಲ್ಲ ಸಾಧ್ಯವಾ? ಎಂದು ಗೇಲಿ ಮಾಡಿದ್ದರು. ಆದರೆ ಕಾಂಗ್ರೆಸ್ ಸರ್ಕಾರಕ್ಕೆ ವರ್ಷ ತುಂಬುವ ಮುನ್ನವೇ ಮಹಿಳೆಯರಿಗೆ ಪ್ರತಿ ತಿಂಗಳು 2000 ರು., ಸರ್ಕಾರಿ ಬಸ್ ನಲ್ಲಿ ಉಚಿತ ಪ್ರಯಾಣ ಸೇರಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ ಎಂದು ಹೇಳಿದರು.

ಇದೀಗ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 25 ಗ್ಯಾರಂಟಿಗಳನ್ನು ಘೋಷಿಸಿದೆ. ಇದರಲ್ಲಿ ಮಹಿಳೆಯರಿಗೆ 1 ಲಕ್ಷ ರು. ನೀಡುವ ಯೋಜನೆ ಇದೆ, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಹಿಳೆಯರ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸ್ಟಾರ್ ಚಂದ್ರು ಅವರಿಗೆ ಮತ ನೀಡಿ ಗೆಲ್ಲಿಸುವಂತೆ ಮನವಿ ಮಾಡಿದರು.

ಪಕ್ಷದ ಅಭ್ಯರ್ಥಿ ವೆಂಕಟರಮಣೇಗೌಡ ( ಸ್ಟಾರ್ ಚಂದ್ರು ) ಮಾತನಾಡಿ, ನಾನೊಬ್ಬ ರೈತನ ಮಗ, ನಿಮ್ಮ ಜಿಲ್ಲೆಯವನು, ಕಾಂಗ್ರೆಸ್ ನಾಯಕರೆಲ್ಲ ಒಗ್ಗೂಡಿ ನನ್ನನ್ನು ಅಭ್ಯರ್ಥಿಯನ್ನಾಗಿಸಿದ್ದಾರೆ, ನಿಮ್ಮ ಆಶೀರ್ವಾದದಿಂದ ನನ್ನನ್ನು ಸಂಸತ್ ಗೆ ಚುನಾಯಿಸುವಂತೆ ಮನವಿ ಮಾಡಿದರು.

ಧ್ವಜ ಪ್ರಕರಣದಲ್ಲಿ ರಾಜ್ಯದ ಗಮನಸೆಳೆದಿದ್ದ ಕೆರಗೋಡು ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ನಾಯಕರು ಅಬ್ಬರದ ಪ್ರಚಾರ ನಡೆಸಿ ಕಾಂಗ್ರೆಸ್ ನ ಶಕ್ತಿ ಪ್ರದರ್ಶನಕ್ಕೆ ಸಾಕ್ಷಿಯಾದರು. ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ಮಹಿಳೆಯರು ಪೂರ್ಣ ಕುಂಭ ಹೊತ್ತು ಸ್ವಾಗತಿಸಿದರೆ, ಕಾರ್ಯಕರ್ತರು ಪಟಾಕಿ ಸಿಡಿಸಿ, ಜೈಕಾರ ಕೂಗುವ ಮೂಲಕ ಬರಮಾಡಿಕೊಂಡರು. ನೂರಾರು ಕಾರ್ಯಕರ್ತರು ಪ್ರಚಾರದಲ್ಲಿ ಭಾಗಿಯಾಗಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದರು. ಪಕ್ಷದ ಮುಖಂಡರಾದ ಕೀಲಾರ ರಾಧಾಕೃಷ್ಣ, ಜಿಪಂ ಮಾಜಿ ಸದಸ್ಯ ಯೋಗೇಶ್ ಇತರರಿದ್ದರು.

# ಎಸ್.ಜಿ.ಟಿ. ಪಿ.ಯು ಕಾಲೇಜಿಗೆ ಉತ್ತಮ ಫಲಿತಾಂಶ



ಬಳ್ಳಾರಿ ಏ :. ಶ್ರೀ ತಿಪ್ಪೇರುದ್ರ ಶಿಕ್ಷಣ ಸಂಸ್ಥೆಯ ಪಿ.ಯು. ಕಾಲೇಜಿನಲ್ಲಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆದಿದ್ದಾರೆ. ವಿಜ್ಞಾನ ವಿಭಾಗದಲ್ಲಿ –ಮೇಘನ ಕುರುವಲ್ಲಿ (576), ಕೆ. ಇಂದಿರಾ (566), ಯಶ್ ಗುಪ್ತ್ (545), ಎಮ್.ನಂದಿನ (535) ವಾಣಿಜ್ಯ ವಿಭಾಗದಲ್ಲಿ–ಕೆ.ಗೀತಾಂಜಲಿ (566), ಶಿವರಾಜ್ ಕುಮಾರ (563), ಬಿ.ಮೋನಿಕಾ (559), ನವೀನ್ ರೆಡ್ಡಿ (558), ಮಹೇಶ್ವರಿ ಎನ್ (554), ನಾಗೇಂದ್ರ ವೈ (545), ಒಟ್ಟು ಎಸ್.ಜಿ.ಟಿ ಕಾಲೇಜಿನ ವಿದ್ಯಾಥಿಗಳು 28 ಉನ್ನತ ಶ್ರೇಣಿ, 142 ಪ್ರಥಮ ದರ್ಜೆ, 48 ದ್ವಿತೀಯ ದರ್ಜೆ ಲಭಿಸಿವೆ.

ಈ ಎಲ್ಲಾ ವಿದ್ಯಾಥಿಗಳಿಗೆ ಶ್ರೀ ತಿಪ್ಪೇರುದ್ರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಸ್.ಎನ್. ರುದ್ರಪ್ಪರವರು ಹಾಗು ಕಾರ್ಯದರ್ಶಿಗಳಾದ ಜಿ .ನಾಗರಾಜ್‌ರವರು, ಪಿ.ಯು ಕಾಲೇಜಿನ ಪ್ರಾಚಾರ್ಯರಾದ ಜಿ.ತಿಪ್ಪೇರುದ್ರರವರು, ಹಾಗೂ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# ಬೆಳ್ಳುಳ್ಳಿಯ ಆರೋಗ್ಯದ ಆರೋಗ್ಯ ಪ್ರಯೋಜನಗಳು

ಬೆಳ್ಳುಳ್ಳಿ ಆಹಾರದ ರುಚಿಯನ್ನು ಹೆಚ್ಚಿಸುವುದರ ಜೊತೆಗೆ ಹಲವಾರು ಆರೋಗ್ಯ ಪ್ರಯೋಜನಗಳನ್ನು ನೀಡುತ್ತದೆ. ಇದು ರಂಜಕ, ಸತು, ಪೊಟ್ಯಾಸಿಯಮ್ ಮತ್ತು ಮೆಗ್ನೀಸಿಯಮ್'ನಂತಹ ಖನಿಜಗಳಲ್ಲಿ ಸಮೃದ್ಧವಾಗಿದೆ. ವಿಟಮಿನ್ ಸಿ, ಕೆ, ಫೋಲೇಟ್, ನಿಯಾಸಿನ್ ಮತ್ತು ಥಯಾಮಿನ್ ಕೂಡ ಬೆಳ್ಳುಳ್ಳಿಯಲ್ಲಿ ಹೇರಳವಾಗಿ ಕಂಡುಬರುತ್ತವೆ.

ಬೆಳ್ಳುಳ್ಳಿ ಬ್ಯಾಕ್ಟೀರಿಯಾ ಮತ್ತು ನಂಜುನಿರೋಧಕ ಗುಣಲಕ್ಷಣಗಳಿಂದಾಗಿ ಇದು ಔಷಧವಾಗಿ ಕಾರ್ಯನಿರ್ವಹಿಸುತ್ತದೆ. ಸಾಮಾನ್ಯವಾಗಿ, ಇದನ್ನು ಖಾಲಿ ಹೊಟ್ಟೆಯಲ್ಲಿ ಸೇವಿಸಿದರೆ ಹೆಚ್ಚು ಪ್ರಯೋಜನಕಾರಿ.

ಬೆಳ್ಳುಳ್ಳಿಯನ್ನು ತಿನ್ನುವುದರಿಂದ ನಮ್ಮ ದೇಹದಲ್ಲಿರುವ ವಿಷಕಾರಿ ಅಂಶಗಳು ಸುಲಭವಾಗಿ ಶುದ್ಧವಾಗುತ್ತವೆ. ಹೊಟ್ಟೆಯನ್ನು ಸ್ವಚ್ಛಗೊಳಿಸುವಲ್ಲಿ ಬೆಳ್ಳುಳ್ಳಿ ತುಂಬಾ ಪರಿಣಾಮಕಾರಿ ಎಂದು ಹೇಳಬಹುದು. ಇದರ ಸೇವನೆಯಿಂದ ಹೊಟ್ಟೆಗೆ ಸಂಬಂಧಿಸಿದ ಕಾಯಿಲೆಗಳೂ ಬರುವುದಿಲ್ಲ.

ಬೆಳ್ಳುಳ್ಳಿಯ ಸೇವನೆಯು ಹೃದಯ ಸಂಬಂಧಿ ಸಮಸ್ಯೆಗಳಿಗೂ ತುಂಬಾ ಪ್ರಯೋಜನಕಾರಿ. ಇದನ್ನು ತಿನ್ನುವುದರಿಂದ ರಕ್ತ ಹೆಪ್ಪುಗಟ್ಟುವುದನ್ನು ಕಡಿಮೆ ಮಾಡುತ್ತದೆ ಮತ್ತು ಹೃದಯಾಘಾತದ ಅಪಾಯವನ್ನು ತಡೆಯುತ್ತದೆ. ನೀವು ಪ್ರತಿದಿನ ಬೆಳ್ಳುಳ್ಳಿ ಮತ್ತು ಜೇನುತುಪ್ಪದ ಮಿಶ್ರಣವನ್ನು ಸೇವಿಸಬಹುದು.

ಹೊಟ್ಟೆಗೆ ಸಂಬಂಧಿಸಿದ ಕಾಯಿಲೆಗಳಿದ್ದರೆ ಬೆಳ್ಳುಳ್ಳಿಯನ್ನು ಸೇವಿಸಿ. ಇದು ನಮ್ಮ ದೇಹದಿಂದ ವಿಷಕಾರಿ ವಸ್ತುಗಳನ್ನು ಸುಲಭವಾಗಿ ತೆಗೆದುಹಾಕುತ್ತದೆ ಮತ್ತು ಹೊಟ್ಟೆಯನ್ನು ಸ್ವಚ್ಛಗೊಳಿಸುತ್ತದೆ.

ಬೆಳ್ಳುಳ್ಳಿಯು ಹೆಚ್ಚಿನ ಉತ್ಕರ್ಷಣ ನಿರೋಧಕಗಳನ್ನು ಹೊಂದಿರುತ್ತದೆ. ಇದು ನಿಮ್ಮ ದೇಹದಲ್ಲಿ ಯಾವುದೇ ಆಕ್ಸಿಡೇಟಿವ್ ಹಾನಿಯನ್ನು ತಡೆಯಲು ಸಹಾಯ ಮಾಡುತ್ತದೆ. ಈ ಉತ್ಕರ್ಷಣ ನಿರೋಧಕ ಗುಣಲಕ್ಷಣಗಳು ಬುದ್ಧಿಮಾಂದ್ಯತೆ ಮತ್ತು ಆಲ್ಝೈಮರ್ನಂತಹ ಕಾಯಿಲೆಗಳನ್ನು ತಡೆಯಲು ಸಹಾಯ ಮಾಡುತ್ತದೆ.

ಚಳಿಗಾಲದಲ್ಲಿ ಬೆಳ್ಳುಳ್ಳಿಯ ಸೇವನೆಯು ಶೀತ, ಕೆಮ್ಮು, ಅಸ್ತಮಾ, ನ್ಯುಮೋನಿಯಾ, ಬ್ರಾಂಕೈಟಿಸ್‌ನಂತಹ ಸಮಸ್ಯೆಗಳಿಗೆ ಚಿಕಿತ್ಸೆ ನೀಡಲು ಸಹಾಯಕವಾಗಿದೆ. ಇದರಿಂದ ಉಸಿರಾಟದ ಕಾಯಿಲೆಗಳನ್ನು ತಡೆಯಬಹುದು.

ಮಲಬದ್ಧತೆ ಸಮಸ್ಯೆಗೆ ಬೆಳ್ಳುಳ್ಳಿ ರಾಮಬಾಣ. ಇದು ನಿಮ್ಮ ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ಮಲಬದ್ಧತೆ ಸಮಸ್ಯೆ ಇದ್ದರೆ ಖಾಲಿ ಹೊಟ್ಟೆಯಲ್ಲಿ ಬೆಳ್ಳುಳ್ಳಿ ಎಸಳುಗಳನ್ನು ಅಗಿಯಿರಿ. ಇದು ನಿಮ್ಮ ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ.

ಹಲ್ಲುನೋವಿಗೆ ಬೆಳ್ಳುಳ್ಳಿ ತುಂಬಾ ಪ್ರಯೋಜನಕಾರಿ. ಹುರಿದ ಬೆಳ್ಳುಳ್ಳಿಯನ್ನು ಸೇವಿಸುವುದರಿಂದ ಹಲ್ಲುನೋವು ನಿವಾರಣೆಯಾಗುತ್ತದೆ.

# ಬೇಸಿಗೆ ರಜೆಯಲ್ಲಿ ವಿದ್ಯಾರ್ಥಿಗಳಿಗೆ ಬಿಸಿಯೂಟ ಪ್ರಾರಂಭ



ಬೆಳಗಾವಿ ದಿ :-ಬೆಳಗಾವಿ ತಾಲೂಕಿನ ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಪ್ರಧಾನ ಮಂತ್ರಿ ಪೋಷಣ ಅಭಿಯಾನ ಯೋಜನೆಯಡಿಯಲ್ಲಿ ಮಧ್ಯಾಹ್ನ ಬಿಸಿಯೂಟವು ಶುಕ್ರವಾರ ದಿ 12ರಿಂದ ಆರಂಭ ವಾಗಿದೆ, ಎಲ್ಲಾ ಶಾಲೆಗಳಲ್ಲಿ ವ್ಯವಸ್ಥಿತವಾಗಿ ಸರ್ವ ಸಿದ್ಧತೆ ಮಾಡಿಕೊಂಡು ಬಿಸಿಯೂಟ ಕಾರ್ಯಶುಕ್ರವಾರ ಏಪ್ರಿಲ್ 12 ರಿಂದ ಆರಂಭವಾಗಿದ್ದು, ಬೇಸಿಗೆ ರಜೆ ಅವಧಿ ಮುಗಿಯುವ ವರೆಗೆ ಅಂದರೆ ಮೇ 28ರ ವರೆಗೆ 41 ದಿನಗಳ ಕಾಲ ಬಿಸಿಯೂಟವು ವಿದ್ಯಾರ್ಥಿಗಳಿಗೆ ದೊರೆಯಲಿದೆ

ಜಿಲ್ಲಾ ಅಕ್ಷರ ದಾಸೋಹ ಯೋಜನೆಯ ಅಧಿಕಾರಿಗಳಾದ ಲಕ್ಷ್ಮಣರಾವ ಯಕ್ಕುಂಡಿ, ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್ ಪಿ ದಾಸಪ್ಪನವರ, ತಾಲೂಕಾ ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕರಾದ ಆರ್ ಸಿ ಮುದಕನಗೌಡರ ರವರ ಸಲಹೆ ಸೂಚನೆ ಮಾರ್ಗದರ್ಶನದಂತೆ ಈ ಬಿಸಿಯೂಟ ಯೋಜನೆಯು ವ್ಯವಸ್ಥಿತವಾಗಿ ಪ್ರಾರಂಭವಾಗಿದೆ

ಬಿಸಿಯೂಟದ ಸಮಯವು ಪ್ರತಿದಿನ ಮಧ್ಯಾಹ್ನ12.30 ರಿಂದ 2 ಘಂಟೆವರೆಗೆ ಇರುತ್ತದೆ ಶನಿವಾರ ದಿನವೂ ಸಹ ಇದೇ ಸಮಯಕ್ಕೆ ಬಿಸಿಯೂಟ ನೀಡಲಾಗುವುದು

ಸರಕಾರಿ ರಜೆಗಳು ಹಾಗೂ ರವಿವಾರ ಬಿಸಿಯೂಟ ಇರುವದಿಲ್ಲ

ಈ ಬೇಸಿಗೆ ರಜೆಯಲ್ಲಿ ಹಾಲು ಹಾಗೂ ಪೌಷ್ಟಿಕ ಆಹಾರ ಕೊಡುವದಿಲ್ಲ, ಬಿಸಿಯೂಟ ಮಾತ್ರ ವಿತರಿಸಲಾಗುತ್ತಿದೆ

ಈ ವರ್ಷ ಬಹಳಷ್ಟು ಬಿಸಿಲಿನ ತಾಪ ಇರುವುದರಿಂದ ವಿದ್ಯಾರ್ಥಿಗಳು ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಕಾಳಜಿ ವಹಿಸಬೇಕು ಶುದ್ಧವಾದ ಕುಡಿಯುವ ನೀರು ಬಳಸಬೇಕೆಂದು ಇಲಾಖೆಯೂ ಸೂಚನೆ ನೀಡಿದೆ

ಬಿಸಿಯೂಟ ಪಡೆಯುವಲ್ಲಿ ಮಕ್ಕಳ ಹಾಜರಾತಿ ಹೆಚ್ಚಿಸಲು ಆಯಾ ಗ್ರಾಮಗಳ ಪಾಲಕರು ಊರಿನ ಹಿರಿಯರು ಮಕ್ಕಳಿಗೆ ಪ್ರೇರಣೆ ನೀಡಬೇಕು. ಬಿಸಿಯೂಟ ಪಡೆಯಲು ಪಾಲಕರು ತಮ್ಮ ಮಕ್ಕಳನ್ನು ಶಾಲೆಗೆ ಕಳಿಸಬೇಕು

ಈ ಬೇಸಿಗೆ ಅವಧಿಯಲ್ಲಿ ಒಂದು ವೇಳೆ ಶಾಲೆಗೆ ಬೇರೆ ಊರಿನ ಸರ್ಕಾರಿ ಹಾಗೂ ಅನುದಾನಿತ ಶಾಲೆಯ ಮಕ್ಕಳು ಬಂದರೆ ಅವರಿಗೂ ಬಿಸಿ ಊಟ ವಿತರಿಸಲಾಗುವುದು ಒಟ್ಟಾರೆ ಮಕ್ಕಳ ಹಿತ ದೃಷ್ಟಿಯಿಂದ ಇಲಾಖೆ ಹಮ್ಮಿಕೊಂಡ ಈ ಕಾರ್ಯಕ್ರಮವನ್ನು ಅತ್ಯಂತ ವ್ಯವಸ್ಥಿತವಾಗಿ ನಿರ್ವಹಿಸಿ ಯಶಸ್ವಿಗೊಳಿಸಲು ಸರ್ವರ ಸಹಕಾರ ಅವಶ್ಯಕವಾಗಿದೆ ಎಂದು ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿಗಳಾದ ಲಕ್ಷ್ಮಣರಾವ ಯಕ್ಕುಂಡಿ ಹಾಗೂ ತಾಲೂಕಾ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರಾದ ಆರ್ ಸಿ ಮುದಕನಗೌಡರ ಅಭಿಪ್ರಾಯ ಪಟ್ಟು ಬಿಸಿಯೂಟ ಯೋಜನೆ ಯಶಸ್ವಿಗೊಳಿಸಲು ವಿನಂತಿಸಿದ್ದಾರೆ

ಬೆಳಗಾವಿ ತಾಲೂಕಿನ ಮಾಸ್ತಮರಡಿಯ ಸರಕಾರಿ ಮಾದರಿ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಬೇಸಿಗೆ ರಜೆಯ ಬಿಸಿಯೂಟ ವಿತರಣೆ ಮಾಡುವ ಮೂಲಕ ಮುಖ್ಯೋಪಾದ್ಯಾಯರಾದ ಬಸವರಾಜ ಸುಣಗಾರ ರವರು ಚಾಲನೆ ನೀಡಿದರು

# ಸಿ.ಇ.ಟಿ ಪರೀಕ್ಷೆ ಪೂರ್ವಭಾವಿ ಸಭೆ



ಗದಗ ಏಪ್ರಿಲ್ : ಇದೇ ಏಪ್ರಿಲ್ 18 ಮತ್ತು 19 ರಂದು ನಡೆಯುವ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಸುಗಮ ಹಾಗೂ ಸುಲಲಿತವಾಗಿ ಪರೀಕ್ಷೆ ನಡೆಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಸೂಚಿಸಿದ್ದಾರೆ. ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ಸುಗಮ ನಿರ್ವಹಣೆ ಸಂಬಂಧ ಅಧಿಕಾರಿಗಳ ಜೊತೆ ಶುಕ್ರವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಯಾವುದೇ ರೀತಿ ಗೊಂದಲಕ್ಕೆ ಅವಕಾಶ ಮಾಡದೇ ಪರೀಕ್ಷೆಯನ್ನು ಸುಲಲಿತವಾಗಿ ನಡೆಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು. ಜಿಲ್ಲೆಯಲ್ಲಿ ಬಿಸಿಗಾಳಿ ಇರುವುದರಿಂದ ಪರೀಕ್ಷಾ ಕೊಠಡಿಯಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ ಜೊತೆಗೆ ಗಾಳಿ ಬೆಳಕು ಇರುವಂತೆ ನೋಡಿಕೊಳ್ಳಬೇಕು. ಹಾಗೆಯೇ ವಿದ್ಯಾರ್ಥಿಗಳಿಗೆ ಯಾವುದೇ ರೀತಿ ತೊಂದರೆಯಾಗದಂತೆ ಗಮನ ಹರಿಸಬೇಕು. ಶಿಸ್ತು ಕಾಪಾಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಅವರು ನಿರ್ದೇಶನ ನೀಡಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ , ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಕುರ್ತಕೋಟಿ, ವಿವಿಧ ಕಾಲೇಜುಗಳ ಪ್ರಾಂಶು ಪಾಲರು, ಇತರರು ಇದ್ದರು. ಪರೀಕ್ಷಾ ಕೇಂದ್ರಗಳ ವಿವರ ಇಂತಿದೆ: ಗದಗ ನಗರದ ಸರಕಾರಿ ಪದವಿ ಪೂರ್ವ ಕಾಲೇಜು, ಎಚ್.ಸಿ.ಇ.ಎಸ್.ಪದವಿ ಪೂರ್ವ ಕಾಲೇಜು, ಕೆ.ವಿ.ಎಸ್.ಆರ್.ಪದವಿ ಪೂರ್ವ ಕಾಲೇಜು, ಶ್ರೀ ತೋಂಟದ ಸಿದ್ಧೇಶ್ವರ ವಿಜ್ಞಾನ ಮತ್ತು ವಾಣಿಜ್ಯ ಪಿ.ಯು.ಕಾಲೇಜ,ವಿದ್ಯಾದಾನ ಸಮಿತಿ ಬಾಲಕರ ಪದವಿ ಪೂರ್ವ ಕಾಲೇಜು, ಬೆಟಗೇರಿಯ ಎ.ಎಸ್.ಎಸ.ಪದವಿ ಪೂರ್ವ ಕಾಲೇಜು, ನಗರದ ಮೈಲಾರಪ್ಪ ಮೆಣಸಗಿ ಪದವಿ ಪೂರ್ವ ಕಾಲೇಜು, ಜಗದ್ಗುರು ತೋಂಟದಾರ್ಯ ಪದವಿ ಪೂರ್ವ ಕಾಲೇಜು, ಲೋಯೊಲಾ ಪದವಿ ಪೂರ್ವ ಕಾಲೇಜು, ವಿದ್ಯಾದಾನ ಸಮಿತಿ ಬಾಲಕಿಯರ ಪದವಿ ಪೂರ್ವ ಕಾಲೇಜು, ಸನ್ಮಾರ್ಗ ಪದವಿ ಪೂರ್ವ ಕಾಲೇಜು, ಕರ್ನಾಟಕ ಪದವಿ ಪೂರ್ವ ಕಾಲೇಜು.

## ಕಾಂಗ್ರೆಸ್ ಗೆದ್ದರೆ ಬೆಳಗಾವಿ ತ್ವರಿತಗತಿಯಲ್ಲಿ ಅಭಿವೃದ್ಧಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭರವಸೆ

# ಹುಂಚನಹಟ್ಟಿ, ಪೀರಣವಾಡಿ, ಸಮರ್ಥ ನಗರದಲ್ಲಿ ಸಚಿವರಿಂದ ಮತ ಯಾಚನೆ



ಬೆಳಗಾವಿ: ಕಾಂಗ್ರೆಸ್ ಪಕ್ಷದಿಂದ ಮಾತ್ರ ದೀನ ದಲಿತರ ಏಳಿಗೆ ಸಾಧ್ಯ. ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಮಹಿಳಾ ಮತ್ತು ಮಹಿಳಾ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ವಿನಂತಿಸಿದರು.

ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಡಗಾವಿ, ಹುಂಚನಹಟ್ಟಿ, ಪೀರಣವಾಡಿ, ಸಮರ್ಥ್ ನಗರದಲ್ಲಿ ಮತಯಾಚಿಸಿದ ಸಚಿವರು, ಕಾಂಗ್ರೆಸ್ ನಂದ ಯೋಗ್ಯ ಅಭ್ಯರ್ಥಿ ಸ್ಪರ್ಧಿಸಿದ್ದು, ಈ ಬಾರಿ ಕಾಂಗ್ರೆಸ್ ಜಯಿಸಲು ಉತ್ತಮ ವಾತಾವರಣವಿದೆ ಎಂದು ಹೇಳಿದರು.

ಹೊರಗಿನ ಅಭ್ಯರ್ಥಿಯನ್ನು ತಿರಸ್ಕರಿಸಿ

ಸಾಧನೆಯೂ ಇಲ್ಲದ, ಬೆಳಗಾವಿಗೆ ಸಂಬಂಧವೂ ಇಲ್ಲದ, ಬೆಳಗಾವಿಗೆ ನಿರಂತರ ಅನ್ಯಾಯ ಮಾಡಿರುವ ಜಗದೀಶ್ ಶೆಟ್ಟರ್ ಅವರನ್ನು ತಿರಸ್ಕರಿಸಿ, ಸ್ಥಳೀಯ ಮನೆ ಮಗ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಬೆಂಬಲಿಸಿ ಎಂದು ಸಚಿವರು ಮನವಿ ಮಾಡಿದರು. ಹುಬ್ಬಳ್ಳಿಯಲ್ಲಿ ಆರು ಬಾರಿ ಶಾಸಕರಾಗಿ, ಎರಡು ಬಾರಿ ವಿರೋಧ ಪಕ್ಷದ ನಾಯಕರಾಗಿ, ಮುಖ್ಯಮಂತ್ರಿ ಆಗಿದ್ದರೂ ಬಿಜೆಪಿಗೆ ದ್ರೋಹ ಎಸಗಿ ಕಳೆದ ವರ್ಷ ಕಾಂಗ್ರೆಸ್ ಗೆ ಬಂದರು. ಬಿಜೆಪಿ ನಾಯಕರನ್ನು ಬೈಯುತ್ತಲೇ ಏಕಾಏಕಿ ಕಾಂಗ್ರೆಸ್ ಬಿಟ್ಟು, ಬಿಜೆಪಿಗೆ ಹೋದರು. ಇಂತ ಸಮಯಸಾಧಕ ರಾಜಕಾರಣಿ ನಮ್ಮ ಜಿಲ್ಲೆಗೆ ಬೇಕಾ ಎಂದು ಪ್ರಶ್ನಿಸಿದರು.

ದೀನ ದಲಿತರ ಏಳಿಗೆಗಾಗಿ ಕಾಂಗ್ರೆಸ್ ಪಕ್ಷ ಹಲವು ಯೋಜನೆಗಳನ್ನ ತಂದಿದೆ. ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಪ್ರತಿ ಮನೆಗೆ ಸರಾಸರಿ 4 ರಿಂದ 5 ಸಾವಿರ ರೂಪಾಯಿ ತಲುಪುತ್ತಿದೆ. ಬಿಜೆಪಿ ಶ್ರೀಮಂತರ ಸಾಲ ಮನ್ನಾ ಮಾಡುವ ಮೂಲಕ ಶ್ರೀಮಂತರಿಗಷ್ಟೇ ಸೀಮಿತವಾಗಿದೆ ಎಂದು ಆರೋಪಿಸಿದರು. ಮೃಣಾಲ್ ಹೆಬ್ಬಾಳ್ಕರ್ ಗೆದ್ದರೆ ಕ್ಷೇತ್ರದ ಮನೆ ಮಗನಾಗಿ ಕೆಲಸ ಮಾಡಲಿದ್ದಾನೆ ಎಂದು ಹೇಳಿದರು. ನಮ್ಮ ಮಗನಿಗೆ ಮತ ನೀಡಿ, ಕ್ಷೇತ್ರದ ಅಭಿವೃದ್ಧಿಗೆ ಕೈಜೋಡಿಸಿ ಎಂದು ಕರೆ ನೀಡಿದರು.

ಸಚಿವರು ಹೋದಲೆಲ್ಲಾ ಸ್ಥಳೀಯ ಕಾರ್ಯಕರ್ತರು ಪಟಾಕಿ ಸಿಡಿಸಿ ಅದ್ದೂರಿ ಸ್ವಾಗತ ನೀಡಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪರಶುರಾಮ ಢಗೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಜೆ.ಪ್ರದೀಪ್ ಮೊದಲಾದವರು ಸಚಿವರಿಗೆ ಸಾಥ್ ನೀಡಿದರು.